# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 70 |
| ಮಾನ್ಯ ಸದಸ್ಯರ ಹೆಸರು | : | ಶ್ರೀ. ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.02.2023 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು |

| ಪ್ರಶ್ನೆ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಡಿಸೆಂಬರ್ 7, 2022ರಂದು ನಡೆದ ಸಚಿವಾಲಯದ ಕಿರಿಯ ಸಹಾಯಕ ಹುದ್ದೆಗಳ ನೇಮಕಾತಿಗಾಗಿ ಲಿಖಿತ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:07–12–2022ರಂದು **ಕರ್ನಾಟಕ ವಿಧಾನಸಭೆ ಸಚಿವಾಲಯದ** ಕಿರಿಯ ಸಹಾಯಕ ಹುದ್ದೆಗಳ ನೇಮಕಾತಿಗೆ ಪರೀಕ್ಷೆಯನ್ನು ನಡೆಸಿದ್ದು, ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ವಿವರ ಕೆಳಕಂಡಂತಿದೆ:<br>ಒಟ್ಟು ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಸಂಖ್ಯೆ – 1286<br>ಪರೀಕ್ಷೆಗೆ ಹಾಜರಾದ ಒಟ್ಟು ಅಭ್ಯರ್ಥಿಗಳ ಸಂಖ್ಯೆ – 1033 |
| ಆ) | ಈ ಪರೀಕ್ಷೆಯ ಫಲಿತಾಂಶವನ್ನು ಯಾವಾಗ ಪ್ರಕಟಿಸಲಾಗುವುದು: | ಕಿರಿಯ ಸಹಾಯಕ ಹುದ್ದೆಗಳಿಗೆ ನಡೆದ ಪರೀಕ್ಷೆ ಸಂಬಂಧ ಈಗಾಗಲೇ ದಿನಾಂಕ:27–12–2022ರಂದು ತಾತ್ಕಾಲಿಕ ಕೀ ಉತ್ತರವನ್ನು ಪ್ರಕಟಿಸಿ, ದಿನಾಂಕ:03–01–2023ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಅಭ್ಯರ್ಥಿಗಳಿಂದ ಸ್ವೀಕರಿಸಿದ ಆಕ್ಷೇಪಣೆಗಳಿಗೆ ತಜ್ಞರ ಸಮಿತಿಯ ವರದಿಯಂತೆ ದಿನಾಂಕ:31–01–2023ರಂದು ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಕಟಿಸಿ, ದಿನಾಂಕ:07–02–2023ರವರೆಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು. ಪ್ರಸ್ತುತ ಆಕ್ಷೇಪಣೆಗಳನ್ನು ಪರಿಶೀಲಿಸಲಾಗುತ್ತಿದ್ದು, ದಿನಾಂಕ:14–02–2023ರಂದು ಅಂತಿಮ ಫಲಿತಾಂಶದ ಪಟ್ಟಿಯನ್ನು ಬಿಡುಗಡೆ ಮಾಡಲಾಗುವುದು. |

| | | |
|---|---|---|
| ಇ) | ಈ ಪರೀಕ್ಷೆಗೆ ಕಡಿಮೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರೂ ಸಹ ಫಲಿತಾಂಶ ಬಿಡುಗಡೆ ವಿಳಂಬಗೊಳ್ಳಲು ಕಾರಣವೇನು? | ದಿನಾಂಕ:07-12-2022ರಂದು ನಡೆದ ಕಿರಿಯ ಸಹಾಯಕ ಹುದ್ದೆಗಳ ನೇಮಕಾತಿ ಪರೀಕ್ಷೆಯ ತಾತ್ಕಾಲಿಕ ಅಂಕಪಟ್ಟಿಯನ್ನು ದಿನಾಂಕ:31-01-2023ರಂದು ಈಗಾಗಲೇ ಪ್ರಕಟಿಸಿದ್ದು, ಯಾವುದೇ ವಿಳಂಬ ಆಗಿರುವುದಿಲ್ಲ. |

**ಇಡಿ 49 ಟಿಇಸಿ 2023**

**(ಡಾ॥ ಅಶ್ವತ್ಥನಾರಾಯಣ್.ಸಿ.ಎನ್.)**

ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,

ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ

ಹಾಗೂ ಜೀವನೋಪಾಯ ಇಲಾಖೆ ಸಚಿವರು